# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಹಿಂದುಳಿದ ವರ್ಗಗಳ ವಿಧವೆಯರಿಗೆ ಆರ್ಥಿಕ ಚಟುವಟಿಕೆ ಕೈಗೊಳ್ಳಲು ಸಾಲ ಮತ್ತು ಸಹಾಯಧನ ಮಂಜೂರಾತಿ ಕುರಿತು.

ಓದಲಾಗಿದೆ:- ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಇವರ ಪತ್ರ ಸಂಖ್ಯೆ: ದೇಹಿನಿ/ವಿ/ ನಬ ಚ ಸಾಯೋ/ಸಿಆರ್-2/2017-18, ದಿನಾಂಕ:07/04/2017.

******

ಪ್ರಸ್ತಾವನೆ:-

ಮೇಲೆ ಓದಲಾದ ಪ್ರಸ್ತಾವನೆಯಲ್ಲಿ, 2017-18ನೇ ಸಾಲಿನ ಸನ್ಮಾನ್ಯ ಮುಖ್ಯಮಂತ್ರಿಗಳ ಆಯವ್ಯಯ ಭಾಷಣದ ಕಂಡಿಕ 200ರ ಉಪ ಕಂಡಿಕೆ-1ರಲ್ಲಿ "ಹಿಂದುಳಿದ ವರ್ಗಗಳ ವಿಧವೆಯರು ಆರ್ಥಿಕ ಚಟುವಟಿಕೆಗಳನ್ನು ಕೈಗೊಳ್ಳಲು 40,000/-ರೂ.ಗಳ (10,000/-ರೂ. ಸಹಾಯಧನ ಮತ್ತು ಶೇ.4ರ ಬಡ್ಡಿದರದಲ್ಲಿ 30,000/-ರೂ. ಸಾಲ) ಆರ್ಥಿಕ ನೆರವನ್ನು ನೀಡಲಾಗುವುದು" ಎಂದು ಘೋಷಿಸಲಾಗಿರುತ್ತದೆ. ಘೋಷಣೆ ಅನುಷ್ಠಾನಕ್ಕೆ 2017-18ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ 2225-03-190-0-04ರಲ್ಲಿ ನಿಗಮಕ್ಕೆ ಒದಗಿಸಿರುವ ಅನುದಾನದ ಮೊತ್ತ ರೂ.23,500.00 ಲಕ್ಷಗಳಲ್ಲಿ, ರೂ.500.00 ಲಕ್ಷಗಳನ್ನು ಹಂಚಿಕೆ ಮಾಡಿಕೊಂಡು ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರದ ಅನುಮೋದನೆ ಕೋರಿ ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲಿಸಿರುತ್ತಾರೆ.

COMPUTER NO. 716
DATE 12/5/17

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯು 387 ಬಿಎಂಎಸ್ 2017, ಬೆಂಗಳೂರು
ದಿನಾಂಕ:10-05-2017

1101
12/5/17

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನಲೆಯಲ್ಲಿ, 2017-18ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ:200ರ ಉಪ ಕಂಡಿಕೆ 1ರನ್ನು ಅನುಷ್ಠಾನಗೊಳಿಸಲು ಲೆಕ್ಕ ಶೀರ್ಷಿಕೆ 2225-03-190-0-04ರಲ್ಲಿ ಒದಗಿಸಿರುವ ಮೊತ್ತ ರೂ.23,500.00 ಲಕ್ಷಗಳಲ್ಲಿ, ರೂ.500.00 ಲಕ್ಷಗಳ ಅನುದಾನವನ್ನು ಬಳಸಿಕೊಂಡು "ಹಿಂದುಳಿದ ವರ್ಗಗಳ ವಿಧವೆಯರು ಆರ್ಥಿಕ ಚಟುವಟಿಕೆಗಳನ್ನು ಕೈಗೊಳ್ಳಲು 40,000/-ರೂ.ಗಳ (10,000/-ರೂ. ಸಹಾಯಧನ ಮತ್ತು ಶೇ.4ರ ಬಡ್ಡಿದರದಲ್ಲಿ 30,000/-ರೂ. ಸಾಲ) ಆರ್ಥಿಕ ನೆರವನ್ನು ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಮಂಜೂರು ಮಾಡಲು ಸರ್ಕಾರದ ಅನುಮೋದನೆ ನೀಡಿದೆ. ಈ ಆದೇಶಕ್ಕೆ ಲಗತ್ತಿಸಿರುವ ಯೋಜನೆಯ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 243 ವೆಚ್ಚ-3 2017, ದಿನಾಂಕ: 26/04/2017 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿ 63 ಐಎಂಎಂ 2017, ದಿನಾಂಕ:27.04.2017ರ ಸಹಮತಿಯನ್ವಯ ಹೊರಡಿಸಲಾಗಿದೆ.

11 MAY 2017

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

(ಆರ್. ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು, (ಎ ಮತ್ತು ಇ) (ಲೆಕ್ಕ ಪರಿಶೋಧನೆ-1) (ಲೆಕ್ಕಪರಿಶೋಧನೆ-2), ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.

...2

3. ಸರ್ಕಾರದ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ.
4.ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ.
5.ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6.ರಾಜ್ಯ ಹುಜೂರು ಖಜಾನೆ, ಬೆಂಗಳೂರು.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು, ವಿಕಾಸ ಸೌಧ.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

----

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 387 ಬಿಎಂಎಸ್ 2017, ದಿನಾಂಕ:10.05.2017ಕ್ಕೆ**

**ಅನುಬಂಧ**

**ಹಿಂದುಳಿದ ವರ್ಗಗಳ ವಿಧವೆಯರು ಆರ್ಥಿಕ ಚಟುವಟಿಕೆ ಕೈಗೊಳ್ಳಲು ಸಾಲ ಮತ್ತು ಸಹಾಯಧನದ ಸೌಲಭ್ಯ ಒದಗಿಸಲು ಅನುಷ್ಠಾನಗೊಳಿಸುವ ಯೋಜನೆಯ ನಿಯಮ ಮತ್ತು ಮಾರ್ಗಸೂಚಿಗಳು.**

* * * * * * * * * *

ಪ್ರಸ್ತಾವನೆ:-

2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಹಿಂದುಳಿದ ವರ್ಗಗಳ ವಿಧವೆಯರು ಆರ್ಥಿಕ ಚಟುವಟಿಕೆ ಕೈಗೊಳ್ಳಲು ಸಾಲ ಮತ್ತು ಸಹಾಯಧನದ ಆರ್ಥಿಕ ನೆರವನ್ನು ನೀಡಲಾಗುವುದೆಂದು ಘೋಷಿಸಲಾಗಿರುತ್ತದೆ. ಸರ್ಕಾರದ ಈ ಘೋಷಣೆಯಂತೆ ಹಿಂದುಳಿದ ವರ್ಗಗಳ ವಿಧವೆಯರಿಗೆ ಆರ್ಥಿಕ ಚಟುವಟಿಕೆ ಕೈಗೊಳ್ಳಲು ಸಾಲ ಮತ್ತು ಸಹಾಯಧನ ಮಂಜೂರಾತಿಗೆ ಈ ಕೆಳಕಂಡಂತೆ ಮಾರ್ಗಸೂಚಿಗಳು.

1. **ಯೋಜನೆಯ ಉದ್ದೇಶಗಳು**

   1) ಹಿಂದುಳಿದ ವರ್ಗಗಳ ವಿಧವೆಯರ ಅರ್ಥಿಕಾಭಿವೃದ್ಧಿಗಾಗಿ ಸ್ವಯಂ ಉದ್ಯೋಗ ಕೈಗೊಳ್ಳುವ ಹೈನುಗಾರಿಕೆ, ಸಣ್ಣ ವ್ಯಾಪಾರ, ಸೇವಾವಲಯ, ಮುಂತಾದ ಆರ್ಥಿಕ ಚಟುವಟಿಕೆಗಳಿಗೆ ರಿಯಾಯಿತಿ ಬಡ್ಡಿದರದಲ್ಲಿ ಸಾಲ ಹಾಗೂ ಸಹಾಯಧನವನ್ನು ಒದಗಿಸುವುದು.

2. **ಯೋಜನೆಯಲ್ಲಿ ಪ್ರಯೋಜನ ಪಡೆಯಲು ಇರಬೇಕಾದ ಅರ್ಹತೆಗಳು**

   ಅ) ಈ ಯೋಜನೆಯಲ್ಲಿ ಆರ್ಥಿಕ ಸಹಾಯ ಪಡೆಯಲು ಅರ್ಜಿದಾರರು ವಿಧವೆಯರಾಗಿರಬೇಕು.

   ಆ) ದಿನಾಂಕ:30/03/2002ರ ಸರ್ಕಾರದ ಆದೇಶ ಸಂಖ್ಯೆ/ಎಸ್‌ಡಬ್ಲ್ಯೂಡಿ/228/ಬಿಸಿಎ/2000 ರಲ್ಲಿ ಗುರ್ತಿಸಿದ ಅಥವಾ ಸರ್ಕಾರವು ಕಾಲಕಾಲಕ್ಕೆ ಗುರ್ತಿಸಿ ಅಂಗೀಕರಿಸಿದ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿಗೆ ಸೇರಿದವರಾಗಿರಬೇಕು.( ವಿಶ್ವಕರ್ಮ ಸಮುದಾಯಗಳು ಹಾಗೂ ಅಲ್ಪಸಂಖ್ಯಾತರನ್ನು ಹೊರತು ಪಡಿಸಿ)

   ಇ) ಅರ್ಜಿದಾರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ. 40,000/-ಗಳು ಪಟ್ಟಣ ಪ್ರದೇಶದವರಿಗೆ ರೂ. 55,000/-ರೂ.ಗಳನ್ನು ಮೀರಿರಬಾರದು.

   ಈ) ಕರ್ನಾಟಕ ರಾಜ್ಯದಲ್ಲಿ ಕನಿಷ್ಠ 10 ವರ್ಷ ವಾಸವಾಗಿರಬೇಕು.

   ಉ) ಅರ್ಜಿದಾರರ ವಯಸ್ಸು ಕನಿಷ್ಠ 18 ವರ್ಷಗಳು ಹಾಗೂ ಗರಿಷ್ಠ 60 ವರ್ಷಗಳ ಮಿತಿಯೊಳಗಿರಬೇಕು.

   ಊ) ನಿಗಮದ ಬೇರೆ ಯಾವುದೇ ಯೋಜನೆಯಲ್ಲಿ ಸಾಲ ಅಥವಾ ಸವಲತ್ತು ಪಡೆದಿರಬಾರದು.

   ಋ) ಈ ಯೋಜನೆಯಲ್ಲಿ ಶೇ.5ರಷ್ಟು ಅಂಗವಿಕಲರಿಗೆ ಸೌಲಭ್ಯ ಒದಗಿಸಬೇಕು.

   ಎ) ಈ ಯೋಜನೆಯಲ್ಲಿ ಸಾಲ ಪಡೆಯ ಬಯಸುವ ಅರ್ಜಿದಾರರು ಯಾವುದಾದರೂ ಆರ್ಥಿಕ ಚಟುವಟಿಕೆ ಕೈಗೊಳ್ಳಬೇಕು.

   ಏ) ಈ ಯೋಜನೆಯಲ್ಲಿ ಸವಲತ್ತು ಪಡೆಯ ಬಯಸುವ ಅರ್ಜಿದಾರರು ವಾಸಿಸುತ್ತಿರುವ ವ್ಯಾಪ್ತಿಗೆ ಬರುವ ಬ್ಯಾಂಕ್ ಶಾಖೆಯ ಖಾತೆಯನ್ನು ಕಡ್ಡಾಯವಾಗಿ ಹೊಂದಿರಬೇಕು.

3. **ಘಟಕವೆಚ್ಚ, ಸಾಲದ ಮೊತ್ತ ಮತ್ತು ಸಹಾಯಧನ**

   ಹಿಂದುಳಿದ ವರ್ಗಗಳ ವಿಧವೆಯರು ಆರ್ಥಿಕ ಚಟುವಟಿಕೆ ಕೈಗೊಳ್ಳಲು ಗರಿಷ್ಠ ರೂ. 40,000/-ಗಳು (10,000/-ರೂ.ಗಳ ಸಹಾಯಧನ ಹಾಗೂ 30,000/-ರೂಗಳ ಸಾಲವನ್ನು ಶೇ.4ರಷ್ಟು ಬಡ್ಡಿದರದಲ್ಲಿ) ಮಂಜೂರು ಮಾಡುವುದು.

...2

4. <u>ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು</u>

1) ಅರ್ಜಿದಾರರು ವಿಧವೆಯಾರಗಿರುವ ಬಗ್ಗೆ ಕಂದಾಯ ಅಧಿಕಾರಿಗಳು ನೀಡುತ್ತಿರುವ ಮಾಸಾಶನದ ಪ್ರಮಾಣ ಪತ್ರ.ದ ದೃಢೀಕೃತ ಪ್ರತಿ.
2) ಹಿಂದುಳಿದ ವರ್ಗಗಳಿಗೆ ಸೇರಿರುವ ಬಗ್ಗೆ ಸಂಬಂಧಿಸಿದ ತಾಲ್ಲೂಕು ತಹಶೀಲ್ದಾರ್/ ಕಂದಾಯ ಅಧಿಕಾರಿಗಳಿಂದ ನಿಗದಿತ ನಮುನೆಯಲ್ಲಿ ಪಡೆದ ಜಾತಿ ಮತ್ತು ವಾರ್ಷಿಕ ಆದಾಯ ಪ್ರಮಾಣ ಪತ್ರ
3) ಅರ್ಜಿದಾರರ ವಾಸದ ಪುರಾವೆಗಾಗಿ ಆಧಾರ್ ಕಾರ್ಡ್/ಪಡಿತರ ಚೀಟಿ/ಚುನಾವಣಾ ಗುರುತಿನ ಚೀಟಿ.
4) ಅರ್ಜಿದಾರರ ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ 03 ಫೋಟೋಗಳು.
5) ಅರ್ಜಿದಾರರು ಹೊಂದಿರುವ ಬ್ಯಾಂಕ್ ಖಾತಾ ಸಂಖ್ಯೆ ಮತ್ತು ಐ.ಎಫ್.ಎಸ್.ಸಿ ಸಂಖ್ಯೆಯ ಮಾಹಿತಿಗೆ ಪಾಸ್‌ಪುಸ್ತಕದ ಜೆರಾಕ್ಸ್ ಅಥವಾ ರದ್ದುಗೊಳಿಸಿದ ಚೆಕ್ಕನ ಪ್ರತಿ
6) ಸಾಲದ ಭದ್ರತೆಗೆ ಅರ್ಜಿದಾರರು ಒದಗಿಸುವ ಜಾಮೀನುದಾರರ ಒಪ್ಪಿಗೆ ಪತ್ರ.
7) ಅರ್ಜಿದಾರರ ಮತ್ತು ಜಾಮೀನುದಾರರ ಆಸ್ತಿ ಮತ್ತು ಋಣ ಭಾರದ ಘೋಷಣೆ.
8) ಅರ್ಜಿದಾರರ ಆಧಾರ್ ಕಾರ್ಡ್‌ನ ಜೆರಾಕ್ಸ್ ಪ್ರತಿ.

5. <u>ಫಲಾನುಭವಿಗಳ ಆಯ್ಕೆ ಮತ್ತು ಯೋಜನೆಯ ಅನುಷ್ಠಾನ</u>

ಸರ್ಕಾರದ ಆದೇಶ ಸಂಖ್ಯೆ:ಸಕಇ/162/ಎಸ್.ಡಿ.ಸಿ/2015, ದಿನಾಂಕ:09/09/2015ರ ಆದೇಶದಲ್ಲಿ ವಿಧಾನಸಭಾ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿ ರಚಿಸಿರುವ ಆಯ್ಕೆ ಸಮಿತಿಯು ಈ ಯೋಜನೆಯಲ್ಲಿ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿ ಸಾಲ/ಸೌಲಭ್ಯ ಮಂಜೂರಾತಿ ಮಾಡುವುದು. ಸಮಿತಿಯ ಪರವಾಗಿ ಜಿಲ್ಲಾ ವ್ಯವಸ್ಥಾಪಕರು ಅರ್ಹ ಫಲಾನುಭವಿಗಳಿಂದ ಅರ್ಜಿಗಳನ್ನು ಆಹ್ವಾನಿಸಿ ನಿಗದಿತ ಅವಧಿಯೊಳಗೆ ಅರ್ಜಿಗಳನ್ನು ಸ್ವೀಕರಿಸುವುದು. ಅರ್ಜಿಗಳನ್ನು ಪರಿಶೀಲಿಸಿ ಸಮಿತಿಯ ಮುಂದೆ ಮಂಡಿಸಿ ಆಯಾ ವಿಧಾನಸಭಾ ಕ್ಷೇತ್ರಕ್ಕೆ ನಿಗದಿಪಡಿಸಿದ ಗುರಿಯಂತೆ ಆಯ್ಕೆ ಸಮಿತಿಯ ಮೂಲಕ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿ ಸಾಲ ಮತ್ತು ಸಹಾಯಧನ ಮಂಜೂರು ಮಾಡಿದ ಪ್ರಸ್ತಾವನೆಯನ್ನು ಆಯ್ಕೆ ಸಮಿತಿಯ ನಡವಳಿಯೊಂದಿಗೆ ನಿಗಮದ ವಿಭಾಗೀಯ ಕಛೇರಿಗೆ ಸಾಲ ಮತ್ತು ಸಹಾಯಧನ ಮಂಜೂರಾತಿಗೆ ಕಳುಹಿಸಬೇಕು.

6. <u>ಮೀಸಲಾತಿ</u>

ಈ ಯೋಜನೆಯಲ್ಲಿ ಪ್ರವರ್ಗ 1 ಮತ್ತು 2ಎ ಗೆ ಶೇ.70 ಹಾಗೂ ಪ್ರವರ್ಗ 3ಎ ಮತ್ತು 3ಬಿ ಗೆ ಶೇ.30ರಂತೆ ಮೀಸಲಿರಿಸಿ ಸೌಲಭ್ಯ ಒದಗಿಸಬೇಕು.

7. <u>ಸಾಲ ಮಂಜೂರಾತಿ ವಿಧಾನ</u>

ವಿಧಾನಸಭಾ ಕ್ಷೇತ್ರದ ಆಯ್ಕೆ ಸಮಿತಿಯು ಆಯ್ಕೆ ಮಾಡಿ ಸಾಲ ಮಂಜೂರು ಮಾಡಿದ ಫಲಾನುಭವಿಗಳಿಗೆ ಸಹಾಯಧನ ಮತ್ತು ಸಾಲ ಬಿಡುಗಡೆ ಕೋರಿ ಅರ್ಜಿದಾರರ ಹೆಸರು ಮತ್ತು ವಿಳಾಸ ಜಾತಿ ಆದಾಯ, ಸಾಲದ ಉದ್ದೇಶ, ಸಹಾಯಧನ, ಸಾಲದ ಮೊತ್ತ, ಜಾಮೀನುದಾರರ ಹೆಸರು ಮತ್ತು ವಿಳಾಸ, ಬ್ಯಾಂಕ್ ಶಾಖೆಯ ಹೆಸರು ಮತ್ತು ಖಾತಾ ಸಂಖ್ಯೆ, ಹಾಗು ಆಧಾರ್ ಸಂಖ್ಯೆ ಈ ವಿವರಗಳನ್ನೊಗೊಂಡ ಪ್ರಸ್ತಾವನೆಗಳನ್ನು ಜಿಲ್ಲಾ ವ್ಯವಸ್ಥಾಪಕರು ಆಯಾ ವಿಭಾಗದ ಸಹಾಯಕ ಪ್ರಧಾನ ವ್ಯವಸ್ಥಾಪಕರಿಗೆ ಕಳುಹಿಸಬೇಕು.

ಸಹಾಯಕ ಪ್ರಧಾನ ವ್ಯವಸ್ಥಾಪಕರು ಜಿಲ್ಲಾ ವ್ಯವಸ್ಥಾಪಕರಿಂದ ಸ್ವೀಕರಿಸಿದ ಪ್ರಸ್ತಾವನೆಗಳನ್ನು ಪರಿಶೀಲಿಸಿ ಸಹಾಯಧನ ಮತ್ತು ಸಾಲವನ್ನು ಮಂಜೂರು ಮಾಡಿ ಆಡಳಿತಾತ್ಮಕ ಮಂಜೂರಾತಿ ಆದೇಶ ನೀಡಬೇಕು. ಆಡಳಿತಾತ್ಮಕ ಮಂಜೂರಾತಿ ಆದೇಶ ನೀಡಿದ ಫಲಾನುಭವಿಗಳಿಂದ ಹಾಗೂ ಜಾಮೀನುದಾರರಿಂದ ನಿಗಮದ ದಿನಾಂಕ 07.03.2013ರ ಸುತ್ತೋಲೆ (ಪರಿಷ್ಕೃತ ದಸ್ತಾವೇಜನ್ವಯ) ದಸ್ತವೇಜುಗಳನ್ನು ಜಿಲ್ಲಾ ವ್ಯವಸ್ಥಾಪಕರು ಪಡೆದು ಸಂರಕ್ಷಿಸಿಡಬೇಕು. ದಸ್ತಾವೇಜು ಪಡೆದ ಪಲಾನುಭವಿಗಳಿಗೆ ಸಾಲ ಮತ್ತು ಸಹಾಯಧನವನ್ನು ಫಲಾನುಭವಿಗಳ ಬ್ಯಾಂಕ್ ಖಾತೆಗೆ ಆರ್.ಟಿ.ಜಿ.ಎಸ್ ಮಾಡಲು ಪ್ರಸ್ತಾವನೆಯನ್ನು ಸಹಾಯಕ ಪ್ರಧಾನ ವ್ಯವಸ್ಥಾಪಕರಿಗೆ ಸಲ್ಲಿಸಬೇಕು.

...3

8. ಸಾಲ ವಿತರಣೆ ಮತ್ತು ಘಟಕ ತಪಾಸಣೆ

ಜಿಲ್ಲಾ ವ್ಯವಸ್ಥಾಪಕರಿಂದ ಹಣ ಬಿಡುಗಡೆಗೆ ಸ್ವೀಕರಿಸಿದ ಪ್ರಸ್ತಾವನೆಗಳನ್ನು ಆಯಾ ವಿಭಾಗೀಯ ಕಚೇರಿಯ ಸಹಾಯಕ ಪ್ರಧಾನ ವ್ಯವಸ್ಥಾಪಕರು, ಪರಿಶೀಲಿಸಿ ಸಾಲ ಮತ್ತು ಸಹಾಯಧನವನ್ನು ಫಲಾನುಭವಿಗಳ ಬ್ಯಾಂಕ್ ಖಾತೆಗೆ ಆರ್.ಟಿ.ಜಿ.ಎಸ್ ಮೂಲಕ ವರ್ಗಾಯಿಸಬೇಕು ಹಾಗೂ ಹಣ ವರ್ಗಾಯಿಸಿರುವ ಬಗ್ಗೆ ಸಾಲ ಮಂಜೂರಾತಿ ಆದೇಶ ಹೊರಡಿಸುವುದು. ಫಲಾನುಭವಿಯು ನಿಗಮದಿಂದ ಪಡೆದ ಸಾಲ ಮತ್ತು ಸಹಾಯಧನದ ಮೊತ್ತದಿಂದ ಉದ್ದೇಶಿತ ಘಟಕವನ್ನು ಸ್ಥಾಪಿಸಿ ನಿರ್ವಹಿಸಬೇಕು. ಈ ಬಗ್ಗೆ ಜಿಲ್ಲಾ ವ್ಯವಸ್ಥಾಪಕರು/ಸಹಾಯಕ ಪ್ರಧಾನ ವ್ಯವಸ್ಥಾಪಕರು ಪ್ರವಾಸದ ಸಮಯದಲ್ಲಿ ಘಟಕ ತಪಾಸಣೆ ಮಾಡಿ ಧೃಢೀಕರಿಸಿಕೊಳ್ಳಬೇಕು.

9. ಸಾಲ/ಸಹಾಯಧನ ಖಾತಾ ಪುಸ್ತಕ ನಿರ್ವಹಣೆ.

ಫಲಾನುಭವಿಗಳಿಗೆ ಬಿಡುಗಡೆಯಾದ ಸಹಾಯಧನ ಮತ್ತು ಸಾಲದ ವಿವರಗಳನ್ನು ಫಲಾನುಭವಿ ಹಾಗೂ ಜಾಮೀನುದಾರರ ಪೂರ್ಣ ವಿವರಗಳನ್ನು ಮಂಜೂರಾತಿ ಆದೇಶ ಪತ್ರದಲ್ಲಿ ತಿಳಿಸಿರುವಂತೆ ಖಾತಾ ಪುಸ್ತಕದಲ್ಲಿ ದಾಖಲಿಸಿ ನಿರ್ವಹಿಸುವುದು.

10. ವಿಮೆ:-

ಈ ಯೋಜನೆಯಲ್ಲಿ ಪಡೆಯುವ ಸಾಲದಿಂದ ಉತ್ಪನ್ನವಾದ ಆಸ್ತಿಯನ್ನು ಬೆಂಕಿ, ನೀರು, ಭೂಕಂಪ, ಕಳ್ಳತನ ಇತ್ಯಾದಿ ಪ್ರಕೋಪಗಳಿಂದ ಆಗುವ ನಷ್ಟವನ್ನು ತಪಿಸಲು ಕಡ್ಡಾಯವಾಗಿ ವಿಮೆ ಮಾಡಿಸಬೇಕು. ವಿಮಾ ಪ್ರೀಮಿಯಮ್ ಮೊತ್ತವನ್ನು ಫಲಾನುಭವಿಗಳು ಭರಿಸಬೇಕು.

11. ಮರುಪಾವತಿ ಅವಧಿ:-

ಅ) ಈ ಯೋಜನೆಯಲ್ಲಿ ಪಡೆದ ಸಾಲವನ್ನು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ 34 ಕಂತುಗಳಲ್ಲಿ ಮಂಜೂರಾತಿ ಆದೇಶದಲ್ಲಿ ನಿಗದಿ ಪಡಿಸಿದಂತೆ ಅಸಲು ಮತ್ತು ಬಡ್ಡಿಯನ್ನು ಮರುಪಾವತಿಸಬೇಕು. ಸಾಲದ ಮರುಪಾವತಿಗೆ 2 ತಿಂಗಳು ವಿರಾಮಾವಧಿ ನೀಡಲಾಗುತ್ತದೆ.

12. ಡಿ.ಸಿ.ಬಿ.ತಯಾರಿಸಿ ಸಾಲ ವಸೂಲಾತಿಗೆ ಕ್ರಮ:-

ಅ) ಸಾಲ ಮಂಜೂರಾತಿ ಆದೇಶದಲ್ಲಿ ನಿಗದಿಪಡಿಸಿದ ಕಂತುಗಳನ್ವಯ ಅಸಲು ಮತ್ತು ಬಡ್ಡಿಯನ್ನು ಪ್ರತಿ ತಿಂಗಳು ಮರುಪಾವತಿಸಬೇಕು. ವಿಳಂಬ ಅವಧಿಗೆ ಶೇ.2ರಷ್ಟು ಸುಸ್ತಿ ಬಡ್ಡಿಯನ್ನು ವಿಧಿಸಿ ವಸೂಲಿ ಮಾಡಬೇಕು.

ಆ) ಸಾಲ ಮರುಪಾವತಿಸದೆ ಸುಸ್ತಿಯಾದ ಫಲಾನುಭವಿಗಳಿಗೆ ನಿಯಮಾನುಸಾರ ಕಾನೂನು ಕ್ರಮ ಜರುಗಿಸಿ ಸಾಲ ವಸೂಲಾತಿಗೆ ಅಗತ್ಯ ಕ್ರಮವಹಿಸುವುದು.

13. ನಿಯಮಗಳಿಗೆ ತಿದ್ದುಪಡಿ:-

ಈ ಯೋಜನೆ ಅನುಷ್ಠಾನಕ್ಕೆ ಕಾಲಕಾಲಕ್ಕೆ ಅವಶ್ಯವಿರುವ ತಿದ್ದುಪಡಿ/ಮಾರ್ಪಾಡು ಅಥವಾ ಸೇರ್ಪಡೆ ಇತ್ಯಾದಿಗಳನ್ನು ಮಾಡಲು ನಿರ್ದೇಶಕ ಮಂಡಳಿಯು ಅಧಿಕಾರ ಹೊಂದಿರುತ್ತದೆ. ಹಾಲಿ ನಿಯಮಗಳಡಿಯಲ್ಲಿ ಯೋಜನೆಯಲ್ಲಿ ಅನುಷ್ಠಾನಗೊಳಿಸುವಾಗ ಉದ್ಭವವಾಗುವ ಶಂಕೆ/ಸಂಶಯಗಳನ್ನು ನಿವಾರಿಸಲು/ಸ್ಪಷ್ಟೀಕರಣ ನೀಡಲು ನಿಗಮದ ವ್ಯವಸ್ಥಾಪಕ ನಿರ್ದೇಶಕರು ಅಧಿಕಾರ ಹೊಂದಿರುತ್ತಾರೆ.

ಆರ್. ಭಾಸ್ಕರ್

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.